**National**
**Kannada**
**14.12.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ನವದೆಹಲಿಯಲ್ಲಿಂದು ರಾಷ್ಟ್ರೀಯ ಇಂಧನ ಸಂರಕ್ಷಣಾ ಪ್ರಶಸ್ತಿ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಭಾರತ-ಜೋರ್ಡಾನ್ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೫ನೇ ವಾರ್ಷಿಕೋತ್ಸವ ನಿಮಿತ್ತ ಪ್ರಧಾನಿ ನರೇಂದ್ರ ಮೋದಿ ನಾಳೆ ಅಮಾನ್‌ಗೆ ಭೇಟಿ

೩. ಕೋಲ್ಕತ್ತಾ ಫುಟ್ಬಾಲ್ ಕ್ರೀಡಾಂಗಣದಲ್ಲಿ ದಾಂದಲೆ ಪ್ರಕರಣ; ಸ್ವಯಂ ಪ್ರೇರಿತ ದೂರು ದಾಖಲಿಸಿದ ಪೊಲೀಸರು

೪. ಟಿ-೨೦ ಕ್ರಿಕೆಟ್; ಇಂದು ಭಾರತ - ದಕ್ಷಿಣ ಆಫ್ರಿಕಾ ತಂಡಗಳ ನಡುವೆ ಹಣಾಹಣಿ

*****************

ಇಂಧನ ಸಂರಕ್ಷಣೆ ಇನ್ನು ಮುಂದೆ ಕೇವಲ ಒಂದು ಆಯ್ಕೆಯಲ್ಲ. ಅದು ಪ್ರಸ್ತುತ ಕಾಲದ ಅವಶ್ಯಕತೆಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನದ ಅಂಗವಾಗಿ ನವದೆಹಲಿಯಲ್ಲಿ ಇಂದು ನಡೆದ ೨೦೨೫ ರ ರಾಷ್ಟ್ರೀಯ ಇಂಧನ ಸಂರಕ್ಷಣಾ ಪ್ರಶಸ್ತಿಗಳು ಮತ್ತು ೨೦೨೫ ರ ಇಂಧನ ಸಂರಕ್ಷಣಾ ರಾಷ್ಟ್ರೀಯ ಚಿತ್ರಕಲಾ ಸ್ಪರ್ಧೆಯ ವಿಜೇತರನ್ನು ರಾಷ್ಟ್ರಪತಿಯವರು ಸನ್ಮಾನಿಸಿದರು.ಈ ವೇಳೆ, ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಇಂಧನ ಉಳಿತಾಯವು, ಪ್ರಕೃತಿಯ ಬಗ್ಗೆ ಜವಾಬ್ದಾರಿಯ ಪ್ರಜ್ಞೆಯನ್ನು ಪ್ರತಿಬಿಂಬಿಸುತ್ತದೆ ಮತ್ತು ಭವಿಷ್ಯದ ಪೀಳಿಗೆಗೆ ಕಾಳಜಿ ಮತ್ತು ಸೂಕ್ಷ್ಮತೆಯನ್ನು ಪ್ರದರ್ಶಿಸುತ್ತದೆ ಎಂದು ಪ್ರತಿಪಾದಿಸಿದರು. ಇಂಧನ ಸಂರಕ್ಷಣೆ ಮತ್ತು ಶುದ್ಧ ಇಂಧನ ಪರಿವರ್ತನೆಯ ಕ್ಷೇತ್ರಗಳಲ್ಲಿ ಭಾರತ ಮಹತ್ವದ ಹೆಜ್ಜೆಗಳನ್ನು ಇಟ್ಟಿದೆ. ದೇಶವು ನಿಗದಿತ ಸಮಯಕ್ಕೂ ಮುನ್ನ ತನ್ನ ಶುದ್ಧ ಇಂಧನ ಬದ್ಧತೆಗಳನ್ನು ಪೂರೈಸಿದೆ. ಇದು ವರ್ಧಿತ ಇಂಧನ ದಕ್ಷತೆ ಮತ್ತು ಡಿಕಾರ್ಬನೈಸೇಶನ್ ದಿಕ್ಕಿನಲ್ಲಿ ಪ್ರಮುಖ ಸಾಧನೆಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

ಧ್ವನಿ-ರಾಷ್ಟ್ರಪತಿ ದ್ರೌಪದಿ ಮುರ್ಮು ( ೨೮ ಸೆಕೆಂಡ್ಸ್)

ಇಂಧನ ಸಂರಕ್ಷಣೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಇಂಧನ ದಕ್ಷತೆಯಲ್ಲಿ ರಾಷ್ಟ್ರದ ಸಾಧನೆಗಳನ್ನು ಪ್ರತಿಬಿಂಬಿಸಲು ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನವನ್ನು ವಾರ್ಷಿಕವಾಗಿ ಡಿಸೆಂಬರ್ ೧೪ ರಂದು ಆಚರಿಸಲಾಗುತ್ತದೆ. ಇಂಧನ ಸಚಿವಾಲಯದ ಮಾರ್ಗದರ್ಶನದಲ್ಲಿ ಇಂಧನ ದಕ್ಷತೆಯ ಶಾಖೆ, ಈ ನಿರ್ದಿಷ್ಟ ದಿನದಂದು ಇಂಧನ ಸಂರಕ್ಷಣಾ ಪ್ರಶಸ್ತಿಗಳನ್ನು ನೀಡುವ ಮೂಲಕ ಇಂಧನ ಬಳಕೆಯನ್ನು ಕಡಿಮೆ ಮಾಡುವಲ್ಲಿ ಕೈಗಾರಿಕಾ ಘಟಕಗಳು, ಸಂಸ್ಥೆಗಳು ಮತ್ತು ಸಂಸ್ಥೆಗಳ ಪ್ರಯತ್ನಗಳನ್ನು ಗುರುತಿಸುತ್ತದೆ ಮತ್ತು ಪ್ರೋತ್ಸಾಹಿಸುತ್ತದೆ.

*****************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆಯಿಂದ ಮಂಗಳವಾರದವರೆಗೆ ಜೋರ್ಡಾನ್‌ಗೆ ಭೇಟಿ ನೀಡಲಿದ್ದಾರೆ. ಜೋರ್ಡಾನ್ ದೊರೆ ಎರಡನೇ ಅಬ್ದುಲ್ಲಾ ಬಿನ್ ಅಲ್ ಹುಸೇನ್ ಅವರ ಆಹ್ವಾನದ ಮೇರೆಗೆ ಈ ಭೇಟಿ ಕೈಗೊಳ್ಳಲಿದ್ದಾರೆ.ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೫ನೇ ವಾರ್ಷಿಕೋತ್ಸವ ನಿಮಿತ್ತ, ಪ್ರಧಾನಿ ನರೇಂದ್ರ ಮೋದಿ ಅವರು, ಜೋರ್ಡಾನ್‌ಗೆ ಭೇಟಿ ನೀಡುತ್ತಿದ್ದಾರೆ. ಈ ವೇಳೆ ಭಾರತ ಮತ್ತು ಜೋರ್ಡಾನ್ ನಡುವೆ ಉನ್ನತ ಮಟ್ಟದ ರಾಜಕೀಯ ಒಪ್ಪಂದ ಏರ್ಪಡುವ ಸಾಧ್ಯತೆಯಿದೆ. ಭಾರತ ಮತ್ತು ಜೋರ್ಡಾನ್ ಬಲವಾದ ಮತ್ತು ಸ್ಥಿರವಾಗಿ ವಿಸ್ತರಿಸುತ್ತಿರುವ ಆರ್ಥಿಕ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಭಾರತವು ಜೋರ್ಡಾನ್‌ನ ಮೂರನೇ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿ ಹೊರಹೊಮ್ಮುತ್ತಿದೆ. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ಸುಮಾರು ೨.೮ ಶತಕೋಟಿ ಅಮೆರಿಕನ್ ಡಾಲರ್‌ಗಳ ಮೌಲ್ಯದ್ದಾಗಿದೆ. ಜೋರ್ಡಾನ್ ಭಾರತಕ್ಕೆ ರಸಗೊಬ್ಬರಗಳ ಪ್ರಮುಖ ಪೂರೈಕೆದಾರ, ವಿಶೇಷವಾಗಿ ಫಾಸ್ಫೇಟ್‌ಗಳು ಮತ್ತು ಪೊಟ್ಯಾಶ್, ಇವು ಭಾರತದ ಕೃಷಿ ವಲಯಕ್ಕೆ ನಿರ್ಣಾಯಕವಾಗಿವೆ. ಈ ಸಹಕಾರದ ಪ್ರಮುಖ ಉದಾಹರಣೆಯೆಂದರೆ ಜೋರ್ಡಾನ್ ಇಂಡಿಯಾ ರಸಗೊಬ್ಬರ ಕಂಪನಿ, ಇದು ಭಾರತದ ಇಫ್ಕೊ ಮತ್ತು ಜೋರ್ಡಾನ್ ಫಾಸ್ಫೇಟ್ಸ್ ಗಣಿ ಕಂಪನಿಯ ನಡುವಿನ ೮೬೦ ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಜಂಟಿ ಉದ್ಯಮವಾಗಿದೆ. ಭಾರತದ ಆಹಾರ ಭದ್ರತಾ ಚೌಕಟ್ಟನ್ನು ಬಲಪಡಿಸುವ ಮೂಲಕ ಭಾರತಕ್ಕೆ ಫಾಸ್ಪರಿಕ್ ಆಮ್ಲವನ್ನು ಉತ್ಪಾದಿಸಲು ಮತ್ತು ರಫ್ತು ಮಾಡಲು ಕಂಪನಿಯನ್ನು ಸ್ಥಾಪಿಸಲಾಯಿತು. ಇದರ ಜೊತೆಗೆ, ಸುಮಾರು ೫೦೦ ಶತಕೋಟಿ ಅಮೆರಿಕನ್ ಡಾಲರ್‌ಗಳ ಸಂಚಿತ ಹೂಡಿಕೆಯೊಂದಿಗೆ, ಭಾರತೀಯ ಮೂಲದ ಸುಮಾರು ಹದಿನೈದು ಉಡುಪು ಕಂಪನಿಗಳು ಜೋರ್ಡಾನ್‌ನ ಅರ್ಹ ಕೈಗಾರಿಕಾ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತವೆ. ಈ ಕಂಪನಿಗಳು ಜೋರ್ಡಾನ್‌ನ ವ್ಯಾಪಕವಾದ ಮುಕ್ತ ವ್ಯಾಪಾರ ಒಪ್ಪಂದಗಳು ಹಾಗೂ ಅಮೆರಿಕ, ಯುರೋಪ್ ಮತ್ತು ವಿಶಾಲ ಅರಬ್ ಪ್ರದೇಶದೊಂದಿಗೆ ವಿಶೇಷ ವ್ಯಾಪಾರ ವ್ಯವಸ್ಥೆಗಳಿಂದ

ಪ್ರಯೋಜನ ಪಡೆಯುತ್ತವೆ, ಜಾಗತಿಕ ಮಾರುಕಟ್ಟೆಗಳಿಗೆ ಸಿದ್ಧಪಡಿಸಿದ ಉತ್ಪನ್ನಗಳನ್ನು ರಫ್ತು ಮಾಡುತ್ತವೆ.

*****************

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಕಾಂಗ್ರೆಸ್ ಗೊಂದಲ ಸೃಷ್ಟಿಸುತ್ತಿದೆ ಎಂದು ಬಿಜೆಪಿ ವಕ್ತಾರ ಸಂಬಿತ್ ಪಾತ್ರ ಆರೋಪಿಸಿದ್ದಾರೆ. ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಚುನಾವಣಾ ಸುಧಾರಣೆ ಕುರಿತು ಸಂಸತ್ತಿನಲ್ಲಿ ಈಗಾಗಲೇ ವ್ಯಾಪಕ ಚರ್ಚೆಗಳು ನಡೆದಿವೆ. ಈ ಚರ್ಚೆಗಳ ಸಮಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಅವರು, ಪ್ರತಿಪಕ್ಷಗಳು ಎತ್ತಿರುವ ಎಲ್ಲಾ ಪ್ರಶ್ನೆಗಳಿಗೆ ಒಂದೊಂದಾಗಿ ಪ್ರತಿಕ್ರಿಯಿಸಿದ್ದಾರೆ ಎಂದು ಹೇಳಿದರು. ಭಾರತದ ಸಾಂವಿಧಾನಿಕ ಸಂಸ್ಥೆಗಳನ್ನು ಕಾಂಗ್ರೆಸ್ ಅಗೌರವಿಸುತ್ತಿದೆ ಎಂದು ಆರೋಪಿಸಿದ ಅವರು, ಭಾರತದ ಪ್ರಜಾಪ್ರಭುತ್ವದ ಬಲ ಎಲ್ಲರಿಗೂ ತಿಳಿದಿದೆ ಎಂದರು.

*****************

ಫುಟ್ಬಾಲ್ ಆಟಗಾರ ಲಿಯೋನೆಲ್ ಮೆಸ್ಸಿ ಆಗಮನದ ಸಂದರ್ಭದಲ್ಲಿ ಕೋಲ್ಕತ್ತಾದ ಸಾಲ್ಟ್ ಲೇಕ್ ಯುವ ಭಾರತಿ ಕ್ರೀಡಾಂಗಣದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿದ್ದಾರೆ. ಇನ್ನೊಂದೆಡೆ, ಮೆಸ್ಸಿ ಕಾರ್ಯಕ್ರಮದ ಆಯೋಜಕರಾದ ಶತಾದ್ರು ದತ್ತ ಅವರನ್ನು ಎರಡು ಗಂಟೆಗಳ ಕಾಲ ವಿಚಾರಣೆ ನಡೆಸಿದ ಪೊಲೀಸರು, ನಂತರ ಅವರನ್ನು ಬಂಧಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ತನಿಖೆ ನಡೆಸಲು ನಿವೃತ್ತ ನ್ಯಾಯಮೂರ್ತಿ ಆಶಿಮ್ ಕುಮಾರ್ ರೇ ನೇತೃತ್ವದ ಸಮಿತಿಗೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಆದೇಶಿಸಿದ್ದಾರೆ. ಫುಟ್ಬಾಲ್ ಆಟಗಾರ ಲಿಯೋನೆಲ್ ಮೆಸ್ಸಿಯನ್ನು ನೋಡಲು ಅವಕಾಶ ಸಿಗದ ಕಾರಣ ಕೋಪಗೊಂಡ ಅಭಿಮಾನಿಗಳು ಮತ್ತು ಪ್ರೇಕ್ಷಕರು, ನಿನ್ನೆ ಸಾಲ್ಟ್ ಲೇಕ್ ಯುವ ಭಾರತಿ ಕ್ರೀಡಾಂಗಣಕ್ಕೆ ನುಗ್ಗಿ ಆಸ್ತಿಗಳನ್ನು ನಾಶಪಡಿಸಿದ್ದರು.

*****************

ಪೋಸ್ಟ್‌ಮ್ಯಾನ್‌ಗಳು ಭಾರತದ ಪ್ರತಿಯೊಂದು ಮನೆಗೆ ಪತ್ರಗಳನ್ನು ಮಾತ್ರವಲ್ಲದೆ, ಬ್ಯಾಂಕಿಂಗ್, ವಿಮೆ ಮತ್ತು ಸರ್ಕಾರಿ ಸೇವೆಗಳನ್ನು ತಲುಪಿಸುವ ನಂಬಿಕೆಯ ಸೇತುವೆಗಳಾಗಿದ್ದಾರೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಶ್ಲಾಘಿಸಿದ್ದಾರೆ. ಮಹಾರಾಷ್ಟ್ರದ ಕೊಲ್ಲಾಪುರದಲ್ಲಿ ನಡೆದ ಗ್ರಾಮೀಣ ಡಾಕ್ ಸೇವಕ ಸಮ್ಮೇಳನದಲ್ಲಿ ಗೋವಾ ಮತ್ತು ಪುಣೆ ಪ್ರದೇಶದ ಸುಮಾರು ಆರು ಸಾವಿರ ಗ್ರಾಮೀಣ ಡಾಕ್ ಸೇವಕರ ಬೃಹತ್ ಸಮಾವೇಶ ಉದ್ದೇಶಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾರತವನ್ನು ಸಂಪರ್ಕಿಸುವಲ್ಲಿ ಮತ್ತು ದೇಶದ ಅಭಿವೃದ್ಧಿಯನ್ನು ಮುನ್ನಡೆಸುವಲ್ಲಿ ಪೋಸ್ಟ್ ಮ್ಯಾನ್‌ಗಳು ಪ್ರಮುಖ ಪಾತ್ರವಹಿಸುತ್ತಾರೆ ಎಂದು ಹೇಳಿದರು. ಸುಮಾರು ೬.೫ ಲಕ್ಷ ಹಳ್ಳಿಗಳಿಗೆ ೧ ಲಕ್ಷ ೬೫ ಸಾವಿರಕ್ಕೂ ಹೆಚ್ಚು ಅಂಚೆ ಕಚೇರಿಗಳಿದ್ದು, ನಾವೀನ್ಯತೆ, ವಿಶ್ವಾಸರ್ಹತೆ ಮತ್ತು ಬಲವಾದ ಮೌಲ್ಯಾಧಾರಿತ ವಿಧಾನದಿಂದ ಕಾರ್ಯ ನಿರ್ವಹಿಸುತ್ತಿವೆ ಎಂದ ಅವರು, ಅಂಚೆ ಇಲಾಖೆಯನ್ನು ಆಧುನಿಕ ಲಾಜಿಸ್ಟಿಕ್ಸ್ ಮತ್ತು ಸೇವಾಶಕ್ತಿ ಕೇಂದ್ರವಾಗಿ ಪರಿವರ್ತಿಸುವಂತೆ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಕರೆ ನೀಡಿದರು.

****************

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ಇಂದು ನಡೆಯಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಐದು ಪಂದ್ಯಗಳ ಟಿ-೨೦ ಸರಣಿ, ಪ್ರಸ್ತುತ ೧-೧ರಲ್ಲಿ ಸಮಬಲದಲ್ಲಿದೆ. ಸರಣಿಯ ಆರಂಭಿಕ ಪಂದ್ಯದಲ್ಲಿ ಭಾರತ ಗೆಲುವು ಸಾಧಿಸಿದ್ದು, ಎರಡನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಜಯಶಾಲಿಯಾಗಿದೆ. ಹೀಗಾಗಿ ಮೇಲುಗೈ ಸಾಧಿಸಲು ಉಭಯ ತಂಡಗಳಿಗೂ ಮೂರನೇ ಪಂದ್ಯ ಮಹತ್ವದ್ದಾಗಿದೆ.

****************

ದುಬೈನ ಐಸಿಸಿ ಅಕಾಡೆಮಿ ಮೈದಾನದಲ್ಲಿಂದು ನಡೆಯುತ್ತಿರುವ ಹತ್ತೊಂಬತ್ತು ವರ್ಷದೊಳಗಿನ ಏಷ್ಯನ್ ಕ್ರಿಕೆಟ್ ಕೌನ್ಸಿಲ್-ಎಸಿಸಿ ಏಷ್ಯಾ ಕಪ್ ಕ್ರಿಕೆಟ್‌ನ ಎರಡನೇ ಗುಂಪು ಹಂತದ ಪಂದ್ಯದಲ್ಲಿ ಭಾರತ ತಂಡ, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡದೊಂದಿಗೆ ಸೆಣಸಾಟ ನಡೆಸುತ್ತಿದೆ. ಮಳೆಯ ಹಿನ್ನೆಲೆಯಲ್ಲಿ ಏಕದಿನ ಪಂದ್ಯವನ್ನು ೪೯ ಓವರ್‌ಗಳಿಗೆ ಪಂದ್ಯವನ್ನು ಸೀಮಿತಗೊಳಿಸಲಾಗಿದೆ. ಟಾಸ್ ಸೋತು ಮೊದಲ ಬ್ಯಾಟಿಂಗ್ ಮಾಡುತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ **26.3** ಓವರ್‌ಗಳಲ್ಲಿ **4** ವಿಕೆಟ್ ನಷ್ಟಕ್ಕೆ **151** ರನ್ ಮಾಡಿ ಆಡುತ್ತಿದೆ. ಎರಡು ಗುಂಪುಗಳಲ್ಲಿ ಏಷ್ಯಾದ ಒಟ್ಟು ಎಂಟು ತಂಡಗಳು ಈ ಪಂದ್ಯಾವಳಿಯಲ್ಲಿ ಸ್ಪರ್ಧಿಸುತ್ತಿವೆ. ಆತಿಥೇಯ ಯುಎಇ, ಪಾಕಿಸ್ತಾನ ಮತ್ತು ಮಲೇಷ್ಯಾ ಜೊತೆಗೆ ಭಾರತ ಎ ಗುಂಪಿನಲ್ಲಿ ಸ್ಪರ್ಧಿಸುತ್ತಿದೆ. ಮತ್ತೊಂದೆಡೆ, ಬಾಂಗ್ಲಾದೇಶ, ಶ್ರೀಲಂಕಾ, ಅಫ್ಘಾನಿಸ್ತಾನ ಮತ್ತು ನೇಪಾಳ ತಂಡಗಳು ಬಿ ಗುಂಪಿನಲ್ಲಿ ಸ್ಪರ್ಧಿಸುತ್ತಿವೆ. ಎರಡೂ ಗುಂಪುಗಳ ಅಗ್ರ ೨ ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಪಡೆಯುತ್ತವೆ. ಅಂತಿಮ ಪಂದ್ಯ ಇದೇ ೨೧ ರಂದು ನಡೆಯಲಿದೆ.

****************

ಇಂಡೋನೇಷ್ಯಾದ ಸುಮಾತ್ರದ ವಾಯುವ್ಯ ದ್ವೀಪದಲ್ಲಿ ಕಳೆದ ಹದಿನೈದು ದಿನಗಳಲ್ಲಿ ಪ್ರವಾಹ ಹಾಗೂ ಭೂಕುಸಿತ ಸಂಭವಿಸಿ ಸುಮಾರು ಒಂದು ಸಾವಿರಕ್ಕಿಂತಲೂ ಅಧಿಕ ಮಂದಿ ಸಾವಿಗೀಡಾಗಿದ್ದಾರೆ. ಇನ್ನೂರಕ್ಕಿಂತಲೂ ಅಧಿಕ ಜನರು ಕಾಣೆಯಾಗಿದ್ದು, ಸುಮಾರು ೫ ಸಾವಿರಕ್ಕಿಂತಲೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಪ್ರಕೃತಿ ವಿಕೋಪದಿಂದಾಗಿ ಒಂದು ಲಕ್ಷಕ್ಕಿಂತಲೂ ಮನೆ ಹಾಗೂ ಕಟ್ಟಡಗಳು ಹಾನಿಗೊಂಡಿವೆ. ಘಟನಾ ಸ್ಥಳದಲ್ಲಿ ರಕ್ಷಣೆ ಹಾಗೂ ಪರಿಹಾರ ಕಾರ್ಯಗಳು ಪ್ರಗತಿಯಲ್ಲಿವೆ. ಮಲಾಕ ಸ್ಟ್ರೈಟ್‌ನಲ್ಲಿ ಪ್ರಬಲ ಚಂಡಮಾರುತದಿಂದಾಗಿ ಅಧಿಕ ಮಳೆಯುಂಟಾಗಿ ಏಷ್ಯಾದ ಆಗ್ನೇಯ ರಾಷ್ಟ್ರಗಳ ವಿವಿಧ ಭಾಗಗಳಲ್ಲಿ ಭೂಕುಸಿತ ಸಂಭವಿಸಿದೆ. ಶ್ರೀಲಂಕಾ ಸೇರಿದಂತೆ ಥೈಲ್ಯಾಂಡ್, ಮಲೇಷಿಯಾ ಹಾಗೂ ವಿಯೆಟ್ನಾಂನಲ್ಲಿ ದುರ್ಬಲ ಹವಾಮಾನ ವೈಪರೀತ್ಯ ಉಂಟಾಗಿ ಒಟ್ಟು ೨ ಸಾವಿರ ಮಂದಿ ಸಾವಿಗೀಡಾಗಿದ್ದಾರೆ.

*****************